ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಕಸದಿಂದ ಆದಾಯ ಗಳಿಸಿ ಸ್ವಾವಲಂಬನೆಗೆ ಸಾಥ್‌ನೀಡಿದ ಸ್ವಚ್ಛ ಭಾರತ್ ಮಿಷನ್ (ಗ್ರಾ)




ಗ್ರಾಮೀಣ ಭಾಗದ ಜನರಿಗೆ ಕಸದ ನಿರ್ವಹಣೆಯ ಮಾರ್ಗೋಪಾಯಗಳು ಗೊತ್ತಿಲ್ಲದೆ ಇರುವುದರಿಂದ ರಸ್ತೆ ಬದಿ ಕಸ, ತ್ಯಾಜ್ಯ ವಸ್ತುಗಳನ್ನ ಎಲ್ಲೆಂದರಲ್ಲಿ ಎಸೆಯುವುದು ಕಾಣುತ್ತೇವೆ. ಇದು ಸುತ್ತಮುತ್ತಲಿನ ಪರಿಸರದ ದುರ್ವಾಸನೆಗೆ, ಅನೈರ್ಮಲ್ಯಕ್ಕೆ ಎಡೆಮಾಡಿಕೊಡುತ್ತಿದೆ. ಗ್ರಾಮಸ್ಥರ ಅನಾರೋಗ್ಯಕ್ಕೆ ಮುಖ್ಯವಾಗಿ ಕಾರಣವಾಗಿದೆ.

ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಕೆಲಸ ಮಾಡುತ್ತಿದೆ. ಯೋಜನೆ ಅಡಿಯಲ್ಲಿ ಕೊಪ್ಪಳ ಜಿಲ್ಲೆಯ ಲೇಬಗೇರಿ ತಾಲೂಕಿನ ಲೇಬಗೇರಿ ಗ್ರಾಮ ಪಂಚಾಯಿತಿಯಲ್ಲಿ ತ್ಯಾಜ್ಯ ನಿರ್ವಹಣೆಗೆ ಕಟ್ಟಲಾಗಿರುವ ಸ್ವಚ್ಛ ಸಂಕೀರ್ಣ ಘಟಕ ಇಲ್ಲಿನ ಕಸದ ಸಮಸ್ಯೆಗೆ ಮುಕ್ತಿ ಹಾಡಿದೆ.

## 11.82 ಲಕ್ಷ ವೆಚ್ಚದಲ್ಲಿ ಸುಸಜ್ಜಿತ ಸ್ವಚ್ಛ ಸಂಕೀರ್ಣ ಘಟಕ:

2022-23ನೇ ಸಾಲಿನಲ್ಲಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ರೂ.11.82 ಲಕ್ಷ ವೆಚ್ಚದಲ್ಲಿ ಕೊಪ್ಪಳ ಜಿಲ್ಲೆಯ ಲೇಬಗೇರಿ ತಾಲೂಕಿನ ಲೇಬಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛ ಸಂಕೀರ್ಣ ಘಟಕವನ್ನು ನಿರ್ಮಾಣ ಮಾಡಲಾಗಿದೆ.

ಈ ಸುಸಜ್ಜಿತ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಶೌಚಾಲಯ, ಎರೆಹುಳು ಗೊಬ್ಬರ ಗುಂಡಿಗಳು ಇವೆ. ಹಸಿ ಕಸ, ಒಣಕಸ, ಪೇಪರ್, ಬಾಟಲಿ, ಪ್ಲಾಸ್ಟಿಕ್ ಇತ್ಯಾದಿಗಳನ್ನು ಪ್ರತ್ಯೇಕಿಸಲು ಪ್ರತ್ಯೇಕ ವಿಭಾಗಗಳನ್ನು ನಿರ್ಮಿಸಲಾಗಿದೆ.

## ಕಸ ಸಂಗ್ರಹಣೆಗೆ ವಾಹನ ಖರೀದಿಸಲು ಎಸ್‌ಬಿಎಂ (ಗ್ರಾ) ಯೋಜನೆ ಸಾಥ್

ಸ್ವಚ್ಛ ವಾಹಿನಿ ಮೂಲಕ ಕಸ ಸಂಗ್ರಹಣೆ - ಸ್ವಚ್ಛವಾಹಿನಿಯ ಮೂಲಕ ಪ್ರತಿನಿತ್ಯ ಗ್ರಾಮದ ಮನೆಗಳಿಂದ ಹಸಿ ಕಸ, ಒಣಕಸವನ್ನು ಸಂಗ್ರಹಿಸಿ ಸ್ವಚ್ಛ ಸಂಕೀರ್ಣ ಘಟಕಕ್ಕೆ ತರಲಾಗುತ್ತಿದೆ. ಸ್ವ-ಸಹಾಯ ಸಂಘದ ಮಹಿಳೆಯೊಬ್ಬರು ಸ್ವಚ್ಛವಾಹಿನಿಗೆ ಚಾಲಕಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸ್ವಚ್ಛ ಸಂಕೀರ್ಣವನ್ನು ಸಹ ಸಂಘದ ಮಹಿಳೆಯರೆ ನಡೆಸುತ್ತಾರೆ.

ಕಸದಿಂದ ಆದಾಯ - ಲೇಬಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ 1,375 ಮನೆಗಳು, ಅಂಗಡಿ ಹಾಗೂ ವಾಣಿಜ್ಯ ಕೇಂದ್ರಗಳಿಂದ ಪ್ರತಿದಿನ ಹಸಿಕಸ ಮತ್ತು ಒಣಕಸವನ್ನು ಸಂಗ್ರಹಿಸಲಾಗುತ್ತಿದ್ದು ಜೊತೆಗೆ ಕಸ ಸಂಗ್ರಹಣಾ ಶುಲ್ಕವನ್ನು ಸಹ ಸಂಗ್ರಹಿಸಲಾಗುತ್ತಿದೆ. ಪ್ರತಿ ಮನೆಗೆ ರೂ.30/- ರಂತೆ, ಅಂಗಡಿ ಮತ್ತು ವಾಣಿಜ್ಯ ಕೇಂದ್ರಗಳಿಗೆ ರೂ.50/-ರಂತೆ ಕರವನ್ನು ವಿಧಿಸಿ ವಸೂಲಿ ಮಾಡಲಾಗುತ್ತಿದೆ.

## ಪ್ಲಾಸ್ಟಿಕ್ ಮುಕ್ತ ಗ್ರಾಮ ನಿರ್ಮಾಣಕ್ಕೆ ಪಣ :

ಪರಿಸರಕ್ಕೆ ಹಾನಿಕಾರವಾದ ಪ್ಲಾಸ್ಟಿಕ್‌ಗೆ ಕಡಿವಾಣ ಹಾಕಲು ಲೇಬಗೇರಿ ಗ್ರಾಮ ಪಂಚಾಯಿತಿಯಲ್ಲಿ ವಿವಿಧ ಚಟುವಟಿಕೆಗಳನ್ನು ಕೈಗೊಳ್ಳಲಾಗಿದೆ. ಪ್ಲಾಸ್ಟಿಕ್‌ನಿಂದಾಗುವ ದುಷ್ಪರಿಣಾಮಗಳ ಕುರಿತು ಗ್ರಾಮದ ಮನೆ ಮನೆಗೆ ತೆರಳಿ ಪ್ರಚಾರ ಮಾಡಲಾಗಿದೆ. ಏಕ ಬಳಕೆ ಪ್ಲಾಸ್ಟಿಕ್ ಸಂಗ್ರಹಿಸಲು, ಪ್ರತ್ಯೇಕಿಸಲು ಮತ್ತು ವಿಲೇವಾರಿ ಮಾಡಲು, ಸ್ವಚ್ಛ ಗ್ರಾಮ ನಿರ್ಮಿಸುವ ಪ್ರಕ್ರಿಯೆಯಲ್ಲಿ ಜನರು ತಮ್ಮನ್ನು ತೊಡಗಿಸಿಕೊಳ್ಳಲು ಅರಿವು ಮೂಡಿಸಲಾಗಿದೆ.

ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಲು ಲೇಬಗೇರಿ ಗ್ರಾಮ ಪಂಚಾಯಿತಿಯವರು ಸಾರ್ವಜನಿಕರಿಗೆ ಬಟ್ಟೆ ಚೀಲಗಳನ್ನು ತಯಾರಿಸಿ ವಿತರಿಸಿದ್ದಾರೆ. ಅಲ್ಲದೇ ಏಕ ಬಳಕೆ ಪ್ಲಾಸ್ಟಿಕ್ ತಡೆಯುವ ಅಗತ್ಯತೆಯ ಕುರಿತು ಜಾಗೃತಿ ಸಭೆಗಳು, ವಿಷಯಧಾರಿತ ಕಾರ್ಯಕ್ರಮ ಮಾಡುವ ಮೂಲಕ ಪ್ಲಾಸ್ಟಿಕ್ ಮುಕ್ತ ಗ್ರಾಮ ನಿರ್ಮಾಣಕ್ಕೆ ಅಗತ್ಯವಾದ ಅರಿವು ಮೂಡಿಸಲಾಗಿದೆ. ಒಟ್ಟಾರೆಯಾಗಿ ಕೊಪ್ಪಳ ಜಿಲ್ಲೆಯ ಲೇಬಗೇರಿ ತಾಲೂಕಿನ ಲೇಬಗೇರಿ ಗ್ರಾಮ ಪಂಚಾಯಿತಿ ಕಸವನ್ನು ಸಮರ್ಪಕವಾಗಿ ನಿರ್ವಹಣೆ ಮಾಡುತ್ತಿರುವುದಲ್ಲದೆ, ಆದಾಯ ಸಂಗ್ರಹಿಸುವ ಮೂಲಕ ಸ್ವಚ್ಛಗ್ರಾಮ ನಿರ್ಮಾಣಕ್ಕೆ, ಸ್ವಸ್ಥ ಮತ್ತು ಸ್ವಾವಲಂಬಿ ಬದುಕಿಗೆ ಮಾದರಿಯಾಗಿದೆ.



ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್ ಜಲೋತ್ಸವ ಸ್ವಚ್ಛ ಸಂಕೀರ್ಣ